RNU AIR DHARWAD

# APRIL 01 2024
# ALL INDIA RADIO- DHARWAD
# PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ಇಂದಿನಿಂದ ನೂತನ ಆರ್ಥಿಕ ವರ್ಷ ಆರಂಭ; ವಹಿವಾಟು ಕ್ಷೇತ್ರದಲ್ಲಿ ನೂತನ ಪ್ರಕ್ರಿಯೆಗಳು ಕಾರ್ಯಾರಂಭ.
- ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆ ನಡೆಸಲು ಸಾರ್ವಜನಿಕರು ಸಹಕರಿಸುವಂತೆ ಮುಖ್ಯ ಚುನಾವಣಾ ಆಯುಕ್ತ ರಾಜೀವ್‌ಕುಮಾರ್ ಮನವಿ.
- ಲೋಕಸಭಾ ಚುನಾವಣೆ; ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಧಿಕಾರಿಗಳಿಂದ ಸೂಕ್ತ ಕ್ರಮ.
- ರಾಜ್ಯದ ವಿವಿಧೆಡೆ ಮತದಾನದ ಕುರಿತು ಜಾಗೃತಿ ಮೂಡಿಸಲು ಸ್ವೀಪ ಸಮಿತಿಯಿಂದ ವಿನೂತನ ಕಾರ್ಯಕ್ರಮ.

ಈಗ ವಾರ್ತೆಗಳ ವಿವರ

ಇಂದಿನಿಂದ ನೂತನ ಆರ್ಥಿಕ ವರ್ಷ ಆರಂಭವಾಗಲಿದ್ದು ವಹಿವಾಟು ಕ್ಷೇತ್ರದಲ್ಲಿ ನೂತನ ಪ್ರಕ್ರಿಯೆಗಳು ಕಾರ್ಯಾರಂಭ ಮಾಡಲಿವೆ. ಇದಲ್ಲದೇ, ಅನೇಕ ನಿಯಮಗಳಲ್ಲಿ ಮಹತ್ವದ ಬದಲಾವಣೆಯಾಗಲಿದೆ. ಫಾಸ್ಟ್‌ಟ್ಯಾಗ್ ಕೆವೈಸಿ ಅಪ್‌ಡೇಟಿಂಗ್, ಪ್ಯಾನ್–ಆಧಾರ್ ಜೋಡಣೆಗೆ ನೀಡಲಾಗಿದ್ದ ಅವಕಾಶ ನಿನ್ನೆ ಮುಕ್ತಾಯಗೊಂಡಿದೆ. ಭಾರತದ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಫಾಸ್ಟ್‌ಟ್ಯಾಗ್ ಬಳಕೆಗೆ ಕೆವೈಸಿಯನ್ನು ಕಡ್ಡಾಯಗೊಳಿಸಿದೆ. ಇಂದಿನಿಂದ ಹೆದ್ದಾರಿಗಳಲ್ಲಿ ಬಳಕೆಯಾಗುವ ಫಾಸ್ಟ್‌ಟ್ಯಾಗ್‌ಗಳ ವೈಯಕ್ತಿಕ ಮಾಹಿತಿ ಅಂದರೆ, ಕೆವೈಸಿಯನ್ನು ಕಡ್ಡಾಯವಾಗಿ ಅಪ್‌ಡೇಟ್ ಮಾಡಬೇಕಾಗುತ್ತದೆ. ಕೆವೈಸಿ ಅಪ್‌ಡೇಟ್ ಆಗಿಲ್ಲದ ಫಾಸ್ಟ್ ಟ್ಯಾಗ್‌ಗಳನ್ನು ಬ್ಯಾಂಕ್‌ಗಳು ನಿಷ್ಕ್ರಿಯಗೊಳಿಸಲಿದ್ದು, ಫಾಸ್ಟ್‌ಟ್ಯಾಗ್‌ಗಳಲ್ಲಿ ಬ್ಯಾಲೆನ್ಸ್ ಮೊತ್ತ ಇದ್ದರೂ ಸಹ ಟೋಲ್‌ಗಳಲ್ಲಿ ಪರಿಗಣಿಸಲಾಗುವುದಿಲ್ಲ. ಪ್ಯಾನ್ ಮತ್ತು ಆಧಾರ್ ಜೋಡಣೆಗೆ ಅಂತಿಮ ಗಡುವು ಸಹ ನಿನ್ನೆ ಮುಕ್ತಾಯಗೊಂಡಿದೆ. ಪ್ಯಾನ್–ಆಧಾರ್ ಜೋಡಣೆ ಮಾಡಿಲ್ಲದಿದ್ದಲ್ಲಿ, ಇಂದಿನಿಂದ ಇದಕ್ಕೆ ಒಂದು ಸಾವಿರ ರೂಪಾಯಿ ದಂಡ ಕಟ್ಟಬೇಕಾಗುತ್ತದೆ. ಇಂದಿನಿಂದ ಎಸ್‌ಬಿಐ ಕ್ರೆಡಿಟ್ ಕಾರ್ಡ್ ನಿಯಮಗಳೂ ಸಹ ಬದಲಾಗಲಿವೆ. ಕ್ರೆಡಿಟ್ ಕಾರ್ಡ್ ಮೂಲಕ ಬಾಡಿಗೆ ಪಾವತಿಗಳಿಗೆ ರಿವಾರ್ಡ್ ಪಾಯಿಂಟ್ಸ್ ದೊರೆಯುವುದಿಲ್ಲ. ನೂತನ ಆರ್ಥಿಕ ವರ್ಷದಿಂದ ವಿಮಾ ನಿಯಮಗಳಲ್ಲೂ ಬದಲಾವಣೆಯಾಗಲಿದೆ. ಸರೆಂಡರ್ ವ್ಯಾಲ್ಯೂ ನಿಯಮವನ್ನು ಬದಲಾಯಿಸಲಾಗುವುದು. ವಿಮಾ ಗ್ರಾಹಕರು ಎಷ್ಟು ತಡವಾಗಿ ಪಾಲಿಸಿ ಸರೆಂಡರ್ ಮಾಡುತ್ತಾರೋ, ಅದಕ್ಕೆ ಅನುಗುಣವಾಗಿ ಹೆಚ್ಚು ಸರೆಂಡರ್ ವ್ಯಾಲ್ಯೂ ದೊರೆಯಲಿದೆ. ನೌಕರರ ಭವಿಷ್ಯ ನಿಧಿ ನಿಯಮಗಳು ಬದಲಾಗಲಿವೆ. ಹೊಸ ನಿಯಮದಂತೆ ಉದ್ಯೋಗ ಬದಲಾದಾಗ, ಭವಿಷ್ಯ ನಿಧಿ ಖಾತೆ ಖಾಯಂ ಚಾಲಿತ ವ್ಯವಸ್ಥೆಯ ಮೂಲಕ ವರ್ಗಾವಣೆಯಾಗಲಿದೆ. ಇದಕ್ಕಾಗಿ ಖಾತೆದಾರರ ಮನವಿ ಅರ್ಜಿ ಅಗತ್ಯವಿಲ್ಲ.

*******

ಚುನಾವಣಾ ಆಯೋಗವು ಪ್ರಾರಂಭಿಸಿರುವ ಸಿ–ವಿಜಿಲ್ ಆ್ಯಪ್‌ಗೆ ನಾಗರಿಕರಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಈವರೆಗೆ ದೇಶಾದ್ಯಂತ 79 ಸಾವಿರಕ್ಕೂ ಹೆಚ್ಚು ಮಾದರಿ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣಗಳ ಬಗ್ಗೆ ವರದಿಯಾಗಿದೆ. ಚುನಾವಣೆ ಅಧಿಸೂಚನೆ ಪ್ರಕಟವಾದ ದಿನದಿಂದ ಈವರೆಗೆ ಶೇಕಡ 99ರಷ್ಟು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ ಎಂದು ಚುನಾವಣಾ ಆಯೋಗ ತಿಳಿಸಿದೆ. ಸಿ–ವಿಜಿಲ್ ಆ್ಯಪ್‌ನಲ್ಲಿ ದೂರು ದಾಖಲಾದ ಕೇವಲ 100 ನಿಮಿಷಗಳ ಒಳಗಾಗಿ ಶೇಕಡ 89ರಷ್ಟು ದೂರುಗಳನ್ನು ಇತ್ಯರ್ಥ ಪಡಿಸಿರುವುದು ನೂತನ ದಾಖಲೆಯಾಗಿದೆ. ಈವರೆಗೆ ಚುನಾವಣಾ ಆಯೋಗವು ಸ್ವೀಕರಿಸಿರುವ ದೂರುಗಳ ಪೈಕಿ, 58 ಸಾವಿರದ 500 ದೂರುಗಳು ಅಕ್ರಮ ಬ್ಯಾನರ್ ಹಾಗೂ ಪ್ರಚಾರ ಸಾಮಗ್ರಿಗಳ ಬಗ್ಗೆ ಇದ್ದರೆ, 1 ಸಾವಿರದ 400 ದೂರುಗಳು ಹಣ, ಉಡುಗೊರೆ ಮತ್ತು ಮದ್ಯ ಹಂಚಿಕೆ ಪ್ರಕರಣಗಳಿಗೆ ಸಂಬಂಧಪಟ್ಟಿವೆ. ಸಶಸ್ತ್ರಗಳ ಪ್ರದರ್ಶನ ಹಾಗೂ ಬೆದರಿಕೆ ಒಡ್ಡಿದ 535 ಪ್ರಕರಣಗಳ ಪೈಕಿ, 529 ಪ್ರಕರಣಗಳನ್ನು

ಕೂಡಲೇ ಇತ್ಯರ್ಥ ಪಡಿಸಲಾಗಿದೆ. ಚುನಾವಣಾ ಅಕ್ರಮಗಳ ತಡೆಗೆ ಸಾರ್ವಜನಿಕರ ಮೂಲಕವೇ ಹದ್ದಿನ ಕಣ್ಣಿಡುವ ಚುನಾವಣಾ ಆಯೋಗದ ಈ ಕ್ರಮ ಯಶಸ್ವಿಯಾಗಿದೆ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಯನ್ನು ನಡೆಸಲು ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ಮುಖ್ಯ ಚುನಾವಣಾ ಆಯುಕ್ತ ರಾಜೀವ್‌ಕುಮಾರ್ ಮನವಿ ಮಾಡಿದ್ದಾರೆ.

*******

ಲೋಕಸಭಾ ಚುನಾವಣೆ ಹಿನ್ನೆಲೆ, ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ರಾಜ್ಯಾದ್ಯಂತ ವಿವಿಧ ಜಿಲ್ಲೆಗಳ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ 21 ಚೆಕ್ ಪೋಸ್ಟ್ ಗಳನ್ನು ತೆರೆಯಲಾಗಿದೆ. ಇದರೊಂದಿಗೆ ಜಿಲ್ಲೆಯ ದೇವನಹಳ್ಳಿಯ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಿಗಾ ವಹಿಸಲು ಫ್ಲೈಯಿಂಗ್ ಸ್ಕ್ವ್ಯಾಡ್ ತಂಡವನ್ನು ನಿಯೋಜಿಸಲಾಗಿದೆ. ಈ ತಂಡವು ವಿಮಾನ ನಿಲ್ದಾಣ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿಕೊಂಡು ಭಾರತ ಚುನಾವಣಾ ಆಯೋಗದ ಸೂಚನೆಗಳಂತೆ ಕಾರ್ಯ ನಿರ್ವಹಿಸುತ್ತದೆ. ಖಾಸಗಿ ವಿಮಾನಗಳ ಚಲನವಲನಗಳು ಹಾಗೂ ಪ್ರಯಾಣಿಕರ ತಪಾಸಣೆಯನ್ನು ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ಎನ್.ಶಿವಶಂಕರ ತಿಳಿಸಿದ್ದಾರೆ. ಲೋಕಸಭಾ ಚುನಾವಣೆ ಹಿನ್ನೆಲೆ ಶಿವಮೊಗ್ಗದ ವಿವಿಧ ಚೆಕ್ ಪೋಸ್ಟಗಳಲ್ಲಿ ಅಕ್ರಮ ಮದ್ಯ ಸಾಗಾಣಿಕೆ ಮತ್ತು ಮಾರಾಟವನ್ನು ಪರಿಶೀಲಿಸಲಾಗುತ್ತಿದ್ದು ಪೊಲೀಸ್ ಹಾಗೂ ಅಬಕಾರಿ ಇಲಾಖೆಗಳಿಂದ ಒಟ್ಟು ರೂ. 7 ಸಾವಿರದ 820 ಮೌಲ್ಯದ ಅಕ್ರಮ ಮದ್ಯವನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ. ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧಿಸುವ ಪ್ರತಿಯೊಬ್ಬ ಅಭ್ಯರ್ಥಿಯ ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದ ಪ್ರತಿಯೊಂದು ವೆಚ್ಚದ ಬಗ್ಗೆ ಪ್ರತಿ ದಿನ ನಿಗಾ ವಹಿಸಿ ವರದಿ ಸಲ್ಲಿಸುವಂತೆ ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಚುನಾವಣಾ ವೆಚ್ಚ ವೀಕ್ಷಕ ಅಲೋಕ್ ಕುಮಾರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಚಿತ್ರದುರ್ಗ ಜಿಲ್ಲೆಯ ವಿವಿಧ ಚೆಕ್ ಪೋಸ್ಟಗಳಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್.ಜೆ.ಸೋಮಶೇಖರ್ ನಿನ್ನೆ ಭೇಟಿ ನೀಡಿ ಪರಿಶೀಲಿಸಿದರು. ಚುನಾವಣಾ ಆಯೋಗ ನೀಡಿರುವ ಮಾರ್ಗದರ್ಶನವನ್ನು ಏಪ್ರಿಲ್ 26 ರಂದು ನಡೆಯುವ ಮತದಾನ ಕೇಂದ್ರದಲ್ಲಿ ಮತಗಟ್ಟೆ ಅಧಿಕಾರಿಗಳು ಹಾಗೂ ಸಿಬ್ಬಂದಿ ತಪ್ಪದೇ ಪಾಲಿಸಬೇಕೆಂದು ಉಡುಪಿ ಜಿಲ್ಲಾಧಿಕಾರಿ ಡಾಕ್ಟರ್ ವಿದ್ಯಾ ಕುಮಾರಿ ತಿಳಿಸಿದ್ದಾರೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

ಲೋಕಸಭಾ ಚುನಾವಣೆ ಹಿನ್ನೆಲೆ ರಾಜ್ಯದ ವಿವಿಧೆಡೆ, ಮತದಾನದ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಸೊರಬ ಪುರಸಭೆ ಕಚೇರಿಯಲ್ಲಿ ಮುಖ್ಯಾಧಿಕಾರಿಗಳು ಕಚೇರಿಯ ಎಲ್ಲ ಸಿಬ್ಬಂದಿ ಹಾಗೂ ಪೌರಕಾರ್ಮಿಕರಿಗೆ ಮತದಾನದ ಕುರಿತು ಜಾಗೃತಿ ಮೂಡಿಸಿ, ಸಾರ್ವಜನಿಕರಲ್ಲಿ ಮತದಾನ ಕುರಿತು ಅರಿವು ಮೂಡಿಸುವಂತೆ ತಿಳಿಸಿದರು. ಆಗುಂಬೆ ಭಾಗದಲ್ಲಿ ಚುನಾವಣೆ ಪ್ರಕ್ರಿಯೆ, ಮತದಾನದ ಮಹತ್ವ ಮತ್ತು ಜವಾಬ್ದಾರಿ ಕುರಿತು ಕಾರ್ಯಾಗಾರ ನಡೆಸಿ ಸಾರ್ವಜನಿಕರಿಗೆ ಮಾಹಿತಿ ನೀಡಲಾಯಿತು. ಕಾರ್ಯಾಗಾರದಲ್ಲಿ ಮತದಾರರಿಗೆ ಚುನಾವಣಾ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಸಾರ್ವತ್ರಿಕ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮತದಾನ ಪ್ರಕ್ರಿಯೆಯನ್ನು ಪರಿಣಾಮಕಾರಿಯಾಗಿಸಲು ಈ ಬಾರಿ ಚಾಮರಾಜನಗರ ಜಿಲ್ಲೆಯಲ್ಲಿ 46 ಮತಗಟ್ಟೆಗಳನ್ನು ವಿಶೇಷ ಮತಗಟ್ಟೆಗಳಾಗಿ ಪರಿಗಣಿಸಲಾಗಿದೆ ಎಂದು ಚಾಮರಾಜನಗರ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿಯ ನೋಡಲ್ ಅಧಿಕಾರಿ ಪಿ ಲಕ್ಷ್ಮೀ ತಿಳಿಸಿದ್ದಾರೆ. ಹೆಚ್ಚಿನ ಸಂಖ್ಯೆಯ ಮಹಿಳಾ ಮತದಾರರಿರುವ ಭಾಗದಲ್ಲಿ ಮಹಿಳೆಯರ ವಿಶೇಷತೆ ಪ್ರತಿಬಿಂಬಿಸುವ ವಿವಿಧ ಬಣ್ಣಗಳ ಚಿತ್ತಾರದಿಂದ ಕೂಡಿದ 'ಸಖಿ ಸೌರಭ ಮತಗಟ್ಟೆ', ಯುವ ಮತದಾರರನ್ನು ಮತದಾನಕ್ಕೆ ಪ್ರೇರೇಪಿಸಲು ಜಿಲ್ಲೆಯ ಯುವ ರಾಯಭಾರಿಗಳ ಭಾವಚಿತ್ರಗಳನ್ನುಳ್ಳ 'ಯುವ ಸೌರಭ' ಮತಗಟ್ಟೆ, ದೇಶದ ಬೆನ್ನುಲುಬಾಗಿರುವ ರೈತರಿಗೆ ಗೌರವಿಸಲು ಸಿರಿಧಾನ್ಯಗಳನ್ನೊಳಗೊಂಡಂತೆ ವಿವಿಧ ಹೂ ಗಿಡಗಳ 'ಅನ್ನದಾತ ಮತಗಟ್ಟೆ', ಜಿಲ್ಲೆಯು ಹೆಚ್ಚಿನ ಅರಣ್ಯ ಪ್ರದೇಶ ಹೊಂದಿರುವುದರಿಂದ 'ಹಸಿರು ಮತಗಟ್ಟೆ', ಬುಡಕಟ್ಟು ಜನರು ಹೆಚ್ಚಾಗಿ ವಾಸಿಸುವ ಕಡೆ 'ಸಂಕಲ್ಪ ಮತಗಟ್ಟೆ', ಜಿಲ್ಲೆಯ ಜಾನಪದ ಕಲಾ ಪರಂಪರೆಯನ್ನು ಬಿಂಬಿಸುವ 'ಸಾಂಸ್ಕೃತಿಕ ಮತಗಟ್ಟೆ' ಹಾಗೂ ವಿಶೇಷ ಚೇತನರಿಗಾಗಿ ಮತದಾನಕ್ಕೆ ಸೆಳೆಯಲು 'ಹೊಂಬೆಳಕು ಮತಗಟ್ಟೆ'ಗಳನ್ನು ತೆರೆಯಲಾಗುವುದು ಎಂದು ತಿಳಿಸಿದರು. ಯಾವುದೇ ಆಸೆ ಆಕಾಂಕ್ಷೆಗಳಿಗೆ ಒಳಗಾಗದೆ ಮತ ಚಲಾಯಿಸುವಂತೆ ಯಾದಗಿರಿ ಜಿಲ್ಲಾ ಸ್ವೀಪ್ ಸಮಿತಿ ರಾಯಭಾರಿ, ಹಾಸ್ಯ ಕಲಾವಿದ ಬಸವರಾಜ್ ಮಹಾಮನಿ ಮತದಾರರಲ್ಲಿ ಮನವಿ ಮಾಡಿದ್ದಾರೆ. ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ರಾಜಕೀಯ ಪಕ್ಷಗಳಿಂದ ಬಿರುಸಿನ ಮತಪ್ರಚಾರ ನಡೆಯುತ್ತಿದೆ. ಈ ನಡುವೆ ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾನ

ಜಾಗೃತಿಯೂ ನಿರಂತರವಾಗಿ ನಡೆಯುತ್ತಿದೆ. ಪ್ರಜಾತಂತ್ರದ ಬಹುದೊಡ್ಡ ಹಬ್ಬದಲ್ಲಿ ಪ್ರತಿಯೊಬ್ಬ ಅರ್ಹ ಮತದಾರ ತಪ್ಪದೇ ಪಾಲ್ಗೊಳ್ಳುವ ನಿಟ್ಟಿನಲ್ಲಿ ಜಾಗೃತಿ ಜಾಥಾ, ಬೀದಿ, ನಾಟಕಗಳು, ಲಾವಣಿ ಹಾಗೂ ಜನಪದ ಹಾಡುಗಳ ಮೂಲಕ ಮತದಾರರಲ್ಲಿ ತಮ್ಮ ಹಕ್ಕಿನ ಅರಿವು ಮೂಡಿಸಲಾಗುತ್ತಿದೆ. ಮತಗಟ್ಟೆಗಳನ್ನು ಶೃಂಗರಿಸುವುದರೊಂದಿಗೆ ಮತಗಟ್ಟೆಯ ಗೋಡೆಗಳಲ್ಲಿ ಕರಾವಳಿಯ ಸಂಸ್ಕೃತಿಯ ಚಿತ್ರಣವನ್ನು ಅನಾವರಣಗೊಳಿಸುವ ಕಾರ್ಯ ಸಾಗಿದೆ.

*******

ಆಕಾಶವಾಣಿಯ ಮೈಸೂರು ಕೇಂದ್ರದಲ್ಲಿ ಸ್ಟೆನೋಗ್ರಾಫರ್ ಆಗಿ ಸೇವೆ ಸಲ್ಲಿಸುತ್ತಿದ್ದ ಎಚ್.ಪಿ.ಶ್ರೀನಿವಾಸ್ ಅವರು ನಿನ್ನೆ ಬೆಳಗಿನ ಜಾವ ತೀವ್ರ ಹೃದಯಾಘಾತದಿಂದ ನಿಧನರಾಗಿದ್ದಾರೆ. 1990ರ ಮೇ 22 ರಂದು ಆಕಾಶವಾಣಿ ಮೈಸೂರು ಕೇಂದ್ರದಲ್ಲಿ ಸ್ಟೆನೋಗ್ರಾಫರ್ ಆಗಿ ಸೇವೆ ಆರಂಭಿಸಿದ್ದ ತೀರ್ಥಹಳ್ಳಿಯ ಶ್ರೀನಿವಾಸ್ ಅವರು ನಿಷ್ಠಾವಂತ ಕೆಲಸಗಾರರಾಗಿ ಕಾರ್ಯನಿರ್ವಹಿಸಿ, ಸಿಬ್ಬಂದಿ ವರ್ಗದವರ ಪ್ರೀತಿಗೆ ಪಾತ್ರರಾಗಿದ್ದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನಾಲ್ಕು ತಾಲ್ಲೂಕುಗಳಲ್ಲಿ ಪಶುಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ ಸಹಯೋಗದೊಂದಿಗೆ ಇಂದಿನಿಂದ 5ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ 1 ಲಕ್ಷ 54 ಸಾವಿರದ 480 ಜಾನುವಾರುಗಳಿದ್ದು, ಎಲ್ಲಾ ಜಾನುವಾರುಗಳಿಗೆ ಏಪ್ರಿಲ್ 30 ರವರೆಗೆ ಕಾಲುಬಾಯಿ ರೋಗದ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. 98 ತಂಡಗಳಲ್ಲಿ 243 ಸಿಬ್ಬಂದಿ ಕಾರ್ಯ ನಿರ್ವಹಿಸಲಿದ್ದಾರೆ. ರಾಸುಗಳಿಗೆ ಕಾಲುಬಾಯಿ ರೋಗ ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಮುಂಜಾಗ್ರತಾ ಕ್ರಮವಾಗಿ ಕಾಲುಬಾಯಿ ಲಸಿಕೆ ಹಾಕಿಸಬೇಕಿದೆ ಎಂದು ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಜಿಲ್ಲಾ ಉಪನಿರ್ದೇಶಕ ಡಾಕ್ಟರ್ ಎನ್.ಜಗದೀಶ್ ಕುಮಾರ್ ತಿಳಿಸಿದ್ದಾರೆ.

*******

ರಾಷ್ಟ್ರೀಯ ರೋಗ ನಿಯಂತ್ರಣ ಕಾರ್ಯಕ್ರಮದಡಿ 5ನೇ ಸುತ್ತಿನ ಕಾಲು ಬಾಯಿ ಜ್ವರದ ಲಸಿಕಾ ಕಾರ್ಯಕ್ರಮ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಇಂದಿನಿಂದ ಆರಂಭವಾಗಲಿದ್ದು ಎಪ್ರೀಲ್ 30 ರವರೆಗೆ ನಡೆಯಲಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾ ಪಶುಪಾಲನಾ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

*******

ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ರಾಷ್ಟ್ರೀಯ ರಾಜಕೀಯ ಪಕ್ಷಗಳ ಪ್ರಣಾಳಿಕೆಯಲ್ಲಿ ಮಕ್ಕಳಿಗೆ ಸಂಬಂಧಪಟ್ಟ 18 ಅಂಶಗಳನ್ನು ಸೇರಿಸಬೇಕು ಎಂದು ದಕ್ಷಿಣ ಕನ್ನಡ ಜಿಲ್ಲಾ ಮಕ್ಕಳ ಹಕ್ಕುಗಳ ಸಮನ್ವಯ ಸಂಘಟನೆ ವತಿಯಿಂದ ನಿನ್ನೆ ವಿವಿಧ ರಾಜಕೀಯ ಪಕ್ಷಗಳ ಜಿಲ್ಲಾ ಮುಖಂಡರಿಗೆ ಮನವಿ ಸಲ್ಲಿಸಲಾಯಿತು.

*******